ಫ್ರೆಂಚ್‌ರಾಕ್ಸ್ ಸಬ್ ಡಿವೀಜ್ಞ.

ತಾರೀಖು 23ನೇ ಮಾರ್ಚೀ 1884.

ಇದರಿಂದ ತಿಳಿಯಪಡಿಸುವದೇನಂದರೆ, ಮಂಜ್ಯ ಸಬ್ ರಿಜಿಸ್ಟ್ರಾರ್ ಆಫೀಸಿನಲ್ಲಿ ಬೇವಾರಸಾಗಿ ಯಿರತಕ್ಕ ಯಿವರ ಕೆಳಗೆ ವಿವರಿಸಿರುವ ದಸ್ತಾವೇಜನ್ನು ಹಾಜರ್ ಮಾಡಿದವರೇ ಆಗಲಿ ಅಥವಾ ವಾಪಸ್ ಪಡಿಯಲಿಕ್ಕೆ ಅವರಿಂದ ಕ್ರಮವಾಗಿ ಅಧಿಕಾರ ಹೊಂದಿದ ಮುತಾಲ್ಲೀಕ ಯಾ ಹಕ್ಕುದಾರರೆ ಆಗಲಿ ಈ ನೋಟೀಸ್ ತಾರೀಖು ಲಾಗಾಯತು ವಂದು ತಿಂಗಳ ವಳಗಾಗಿ ಹಾಜರಾಗಿ ವಾಪಸು ತೆಗದುಕೊಳ್ಳದೆ ಹೋದರೆ ರಿಜಿಸ್ಟ್ರೇಷನ್ ನಿಬಂಧನೆಗಳನ್ನು ಅನುಸರಿಸಿ ಅದು ನಾಶಪಡಿಸಲ್ಪಡುವದು.

ನಂಬರ್.	ಬರದುಕೊಟ್ಟವನ ಹೆಸರು ಮತ್ತು ವಾಸಸ್ಥಳ.	ದಸ್ತಾವೇಜನ್ನು ಬರೆಸಿಕೊಂಡವರ ಹೆಸರು ಮತ್ತು ವಾಸಸ್ಥಳ.	ದಸ್ತಾವೇಜು ನೋಂದಾಯಿಸಿದ ತಾರೀಖು	ರಿಜಿಸ್ಟ್ರರ ತಾರೀಖು	ದಸ್ತಾವೇಜಿನ ಸ್ವಭಾವ ಮತ್ತು ಕಿಮ್ಮತ್ತು.
108/1881—82	ಮೈಸೂರು ದೇವಾಂಬಾ ಅಗ್ರಹಾರದಲ್ಲಿ ಇರುವ ಬಾರಕಚೇರಿ ಗುಮಾಸ್ತೆ ಅನಂತರಾಮಯ್ಯ ಇವರ ಮಗ ಇಂಗ್ಲೀಷ್ ಸ್ಕೂಲ್ ಮಾಸ್ಟರ್ ರಘುನಾಥರಾವ್	ಬೆಂಗಳೂರಲ್ಲಿ ಇರುವ ಬಹುಷಿ ಶಿಂಗಯ್ಯಂಗಾರ್ ಮುಕ್ಕಳು ಪರ್ಷ ಅಮಲ್ದಾರ್ ವೆಂಕಟರಂಗಯ್ಯಂಗಾರ್	15—9—81	16—1—82	ಸರ್ವಮಾನ್ಯ ಕೆಸ್ತೂರು ಗ್ರಾಮದಲ್ಲಿ ಇರುವ 24 ವೃತ್ತಿ ಪೈಕೀ 9ನೇ ಸಂಖ್ಯೆ 36 ವರಹಾ ಜೀರೀಜನೆ ವೃತ್ತಿಯನ್ನು 700 ರೂಪಾಯಿಗೆ ಅಧಾರ ಮಾಡಿರುವದಾಗಿ.

ವಿ. ಪಿ. ಮಾಧವರಾವ್,
ರಿಜಿಸ್ಟ್ರರ್.

ಗವರ್ಮೆಂಟ್ ತಯಾರೀ ಬಾಬತು ಸಿಂಕೋನಾ ಫೆಬ್ರಿಫ್ಯೂಜ್ ಎಂಬ ಔಷಧ.

ಈ ಔಷಧವು, ಕ್ವಿನೈನಿಗೆ ಬದಲಾಗಿ ಉಪಯೋಗಿಸತಕ್ಕ ಬಹಳ ಯೋಗ್ಯವಾದ ಔಷಧವಾಗಿರುತ್ತೆ. ಜನಗಳಿಗಾಗಿ ವ ಧರ್ಮಾರ್ಥವಾಗಿ ಗವರ್ಮೆಂಟ್ ಆಫೀಸರಿಗಳು ಕೊಂಡು ಕೊಳ್ಳಬಹುದು, ಬಂದು ಸಲಕ್ಕೆ ಇಪ್ಪತ್ತು ಪೌಂಡುಗಳು ತೆಗದುಕೊಳ್ಳುವ ಯಾವ ಮನುಷ್ಯನಾದರೂ ಕಲ್ಕತ್ತೆಯಲ್ಲಿ ಬೊಟಾನಿಕಲ್ ಗಾರ್ಡನ್ ಸೂಪರಿಂಟೆಂಡೆಂಟರ ದೆಕೆಯಿಂದ ಇದರಡಿ ಕಂಡ ದರಗಳ ಪ್ರಕಾರ ನಗದು ಕೊಟ್ಟೇ ಕೊಂಡು ಕೊಳ್ಳಬೇಕಾಗಿರುತ್ತೆ. ನಾಲ್ಕು ಔನ್ಸ್ ಔಷಧವುಳ್ಳ ತಗರದ ಡಬ್ಬೀ ಬಂದಕ್ಕೆ ರೂ. 4—8—0; ಎಂಟು ಔನ್ಸ್‌ವುಳ್ಳ ಡಬ್ಬಿಗೆ ರೂ. 8—8—0; ಬಂದು ಪೌಂ ಔಷಧವುಳ್ಳ ಡಬ್ಬಿಗೆ ರೂ. 16—8—0; ಬೊಟಾನಿಕಲ್ ಗಾರ್ಡನ್ ಸೂಪರಿಂಟೆಂಡೆಂಟರು ಇದರಡೀ ಕಂಡ ದರ ಪ್ರಕಾರ ನಗದಿಗೇನೇ ಸರ್ವಜನಗಳಿಗೂ ಬದಗಿಸ ಬಹುದು; ನಾಲ್ಕು ಔನ್ಸ್‌ವುಳ್ಳ ಡಬ್ಬಿ ಬಂದಕ್ಕೆ ರೂ. 5—8—0, ಎಂಟು ಔನ್ಸ್‌ವುಳ್ಳ ಡಬ್ಬಿಗೆ ರೂ. 10—8—0, ಬಂದು ಪೌಂ ವುಳ್ಳ ಡಬ್ಬಿಗೆ 20 ರೂಪಾಯಿ. ಈ ಔಷಧವು, ಕಲ್ಕತ್ತೆಯಲ್ಲಿ ಮುಖ್ಯ ಮುಖ್ಯ ಯೂರೋಪಿಯರ್ ನೇಟಿವ್ ವರ್ತಕರಿಂದ ಮಾರಲ್ಪಡುತ್ತೆ. ಸದರೀ ಕಿಮ್ಮತಿನೊಂದಿಗೆ ದರ 4 ಔ 8 ಔನ್ಸ್ ತಗರದ ಡಬ್ಬಿಗೆ ಎಂಟುಆಣೆ ಟಪ್ಪಾಲ್ ಹಾಸಲೂ, ಬಂದು ಪೌಂ ಡಬ್ಬಿಗೆ ಹನ್ನೆರಡು ಆಣೆ ಹಾಸಲೂ ಕೊಡಬೇಕು.

ಕ್ರಿಸ್ಟಲೈಸ್ಡ್ ಸಿಂಕೋನಾ ಫೆಬ್ರಿಫ್ಯೂಜ್.

ಗವರ್ಮೆಂಟ್ ಕೋಠೀಯಲ್ಲಿ ಕೆಂಪುವರ್ಣದ ಸಿಂಕೋನಾ ಪಟ್ಟೆಯಿಂದ ತಯಾರ್ ಮಾಡಲ್ಪಟ್ಟ ಹೊಸದಾದ ಮತ್ತು ಅಭಿವೃದ್ಧವಾದ ತಯಾರಿ—ಇದು ಸಾಧಾರಣವಾದ ಕ್ರಿಸ್ಟಲೈಜ್ಡ್ ಅಲ್ಲದ ಫ್ಯಾಬ್ರಿಫ್ಯೂಜಿಗಿಂತ ಕ್ವಿನೈನಿಗೆ ಸಂಪೂರ್ಣವಾದ ಪ್ರತಿನಿಧಿಯಾಗಿದೆ. ಇದನ್ನು, ಕಲ್ಕತ್ತೆ ಬಳಿ ಸೀಬ್‌ಪೋರ್ ಸಮಿಪದಲ್ಲಿ ರಾಯಲ್‌ಬೊಟಾನಿಕ್ ಗಾರ್ಡನ್ ಸೂಪರಿಂಟೆಂಡೆಂಟರಿಂದ ಗವರ್ಮೆಂಟ್ ಆಫೀಸರಿಗಳು ಸರ್ಕಾರಿಯಾ